# A

# CCE RR
## REVISED

**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು – 560 003**

**KARNATAKA SECONDARY EDUCATION EXAMINATION BOARD, MALLESWARAM, BANGALORE – 560 003**

**ಎಸ್.ಎಸ್.ಎಲ್.ಸಿ. ಪರೀಕ್ಷೆ, ಸೆಪ್ಟೆಂಬರ್, 2020**

**S.S.L.C. EXAMINATION, SEPTEMBER, 2020**

**ಮಾದರಿ ಉತ್ತರಗಳು**

**MODEL ANSWERS**

ದಿನಾಂಕ : 28. 09. 2020 ] **ಸಂಕೇತ ಸಂಖ್ಯೆ : 83-K (Chem.)**

Date : 28. 09. 2020 ] **CODE NO. : 83-K (Chem.)**

**ವಿಷಯ : ವಿಜ್ಞಾನ**

**Subject : SCIENCE**

**(ರಸಾಯನಶಾಸ್ತ್ರ / Chemistry)**

**(ಹೊಸ ಪಠ್ಯಕ್ರಮ / New Syllabus)**

**(ಪುನರಾವರ್ತಿತ ಶಾಲಾ ಅಭ್ಯರ್ಥಿ / Regular Repeater)**

**(ಕನ್ನಡ ಭಾಷಾಂತರ / Kannada Version)**

**[ ಗರಿಷ್ಠ ಅಂಕಗಳು : 80**


**[ Max. Marks : 80**

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|
| 2. | ಇವುಗಳಲ್ಲಿ ನೈಟ್ರೋಜನ್ ಅಣುವಿನ ಸರಿಯಾದ ಇಲೆಕ್ಟ್ರಾನ್ ಚುಕ್ಕಿ ರಚನೆಯನ್ನು ಗುರುತಿಸಿ.<br>(A) :N⋮⋮N: (B) :N̈··N̈:<br>(C) ·N̈::N̈· (D) ·N⋮⋮N·<br>*ಉತ್ತರ :* (A) :N⋮⋮N: | 1 |

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|
| 4. | *A, B, C* ಮತ್ತು *D* ಧಾತುಗಳ ಪರಮಾಣು ಸಂಖ್ಯೆಗಳು ಕ್ರಮವಾಗಿ 3, 9, 4 ಮತ್ತು 8 ಆಗಿವೆ. ಇವುಗಳಲ್ಲಿ ಲೋಹೀಯ ಸ್ವಭಾವವನ್ನು ಹೊಂದಿರುವ ಧಾತುಗಳು<br>(A) *B* ಮತ್ತು *D* (B) *A* ಮತ್ತು *B*<br>(C) *A* ಮತ್ತು *C* (D) *B* ಮತ್ತು *C*<br>***ಉತ್ತರ :*** (C) *A* ಮತ್ತು *C* | 1 |
| 8. | $C_nH_{2n}$ ಸಾಮಾನ್ಯ ಸೂತ್ರವಿರುವ ಮತ್ತು 3 ಕಾರ್ಬನ್ ಪರಮಾಣುಗಳನ್ನು ಹೊಂದಿರುವ ಅಪರ್ಯಾಪ್ತ ಹೈಡ್ರೋಕಾರ್ಬನ್‌ನ ಹೆಸರು ಹಾಗೂ ಅಣುಸೂತ್ರ<br>(A) ಪ್ರೋಪೇನ್, $C_3H_8$ (B) ಸೈಕ್ಲೋಪ್ರೋಪೇನ್, $C_3H_6$<br>(C) ಪ್ರೋಪೈನ್, $C_3H_4$ (D) ಪ್ರೋಪೀನ್, $C_3H_6$<br>***ಉತ್ತರ :*** (D) ಪ್ರೋಪೀನ್, $C_3H_6$ | 1 |
| 10. | ಉಭಯಧರ್ಮಿ ಆಕ್ಸೈಡ್‌ಗಳೆಂದರೇನು ?<br>***ಉತ್ತರ :***<br>ಆಮ್ಲೀಯ ಹಾಗೂ ಪ್ರತ್ಯಾಮ್ಲೀಯ ಗುಣಗಳೆರಡನ್ನೂ ಪ್ರದರ್ಶಿಸುವ ಲೋಹದ ಆಕ್ಸೈಡ್‌ಗಳನ್ನು ಉಭಯಧರ್ಮಿ ಆಕ್ಸೈಡ್‌ಗಳೆನ್ನುತ್ತಾರೆ. | 1 |
| 12. | ಮಾರ್ಜಕವನ್ನು ಬಳಸಿ ನೀರಿನ ಗಡಸುತನವನ್ನು ಪರೀಕ್ಷಿಸಬಹುದೇ ? ಕಾರಣ ಕೊಡಿ.<br>***ಉತ್ತರ :***<br>ಇಲ್ಲ ½<br>ಮಾರ್ಜಕವು ಗಡಸು ನೀರು ಮತ್ತು ಮೆದು ನೀರು ಎರಡರಲ್ಲೂ ನೊರೆಯನ್ನುಂಟು ಮಾಡುತ್ತದೆ ಮತ್ತು ಚರಟ / ಕಲ್ಮಷವನ್ನು ಉಂಟು ಮಾಡುವುದಿಲ್ಲ. ½ | 1 |
| 15. | ಚಿಪ್ಸ್ ತಯಾರಕರು ಚಿಪ್ಸ್‌ನ ಪೊಟ್ಟಣದೊಳಗೆ ನೈಟ್ರೋಜನ್ ಅನಿಲವನ್ನು ಹಾಯಿಸುತ್ತಾರೆ. ಏಕೆ ?<br>***ಉತ್ತರ :***<br>ಚಿಪ್ಸ್ ಉತ್ಕರ್ಷಣೆಗೊಳ್ಳುವುದನ್ನು ತಡೆಗಟ್ಟಲು ಅಥವಾ ಕಮಟುವಿಕೆಯನ್ನು ತಡೆಗಟ್ಟಲು | 1 |
| 18. | ನೀರಿನಲ್ಲಿ ಆಮ್ಲೀಯ ದ್ರಾವಣ ವಿದ್ಯುತ್ತನ್ನು ಪ್ರವಹಿಸುವುದನ್ನು ತೋರಿಸುವ ಚಿತ್ರವನ್ನು ಬರೆದು ಬ್ಯಾಟರಿಯನ್ನು ಗುರುತಿಸಿ.<br>***ಅಥವಾ***<br>ಸಾರರಿಕ್ತ ಸಲ್ಫ್ಯೂರಿಕ್ ಆಮ್ಲದೊಂದಿಗೆ ಸತುವಿನ ಚೂರುಗಳ ವರ್ತನೆ ಮತ್ತು ಉರಿಸುವಿಕೆಯ ಮೂಲಕ ಹೈಡ್ರೋಜನ್ ಅನಿಲದ ಪರೀಕ್ಷೆ ಮಾಡುವ ಉಪಕರಣಗಳ ಜೋಡಣೆಯ ಚಿತ್ರವನ್ನು ಬರೆದು ಸತುವಿನ ಚೂರುಗಳನ್ನು ಗುರುತಿಸಿ. | |

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|

***ಉತ್ತರ :***





ಚಿತ್ರಕ್ಕೆ 1½

ಭಾಗಕ್ಕೆ ½ — 2

***ಅಥವಾ***

***ಉತ್ತರ :***




ಚಿತ್ರಕ್ಕೆ 1½

ಭಾಗಕ್ಕೆ ½ — 2

22. ಮೆಂಡಲೀವ್‌ರ ಆವರ್ತಕ ಕೋಷ್ಟಕದ ಮಿತಿಗಳನ್ನು ಆಧುನಿಕ ಆವರ್ತಕ ಕೋಷ್ಟಕದಲ್ಲಿ ಹೇಗೆ ಸರಿಪಡಿಸಲಾಗಿದೆ ?


***ಅಥವಾ***

ಪರಮಾಣು ಗಾತ್ರವು ಆಧುನಿಕ ಆವರ್ತಕ ಕೋಷ್ಟಕದಲ್ಲಿ ಗುಂಪು ಮತ್ತು ಆವರ್ತಗಳಲ್ಲಿ ಹೇಗೆ ಬದಲಾಗುತ್ತದೆ ? ಏಕೆ ?

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | | ಅಂಕಗಳು |
|---|---|---|---|
| | *ಉತ್ತರ :* | | |
| | ★ ಮೆಂಡಲೀವ್‌ರ ಆವರ್ತಕ ಕೋಷ್ಟಕದಲ್ಲಿ ಧಾತುಗಳನ್ನು ಅವುಗಳ ಪರಮಾಣುರಾಶಿಯ ಏರಿಕೆ ಕ್ರಮದಲ್ಲಿ ಜೋಡಿಸಿದ್ದರಿಂದಾಗಿ, ಒಂದೇ ರೀತಿಯ ಗುಣಗಳುಳ್ಳ ಧಾತುಗಳನ್ನು ಒಟ್ಟಿಗೆ ಗುಂಪುಗೂಡಿಸಲು ಅನುಕ್ರಮ ಜೋಡಣೆಯನ್ನು ಬದಲಿಸಲಾಯಿತು. (ಉದಾ. : ಕೊಬಾಲ್ಟ್ ಅನ್ನು ನಿಕ್ಕಲ್‌ಗಿಂತ ಮೊದಲೇ ಇಡಲಾಗಿದೆ) ಸಮಸ್ಥಾನಿಗಳಿಗೆ ಯಾವುದೇ ಸ್ಥಾನವಿರಲಿಲ್ಲ. | 1 | |
| | ★ ಆಧುನಿಕ ಆವರ್ತಕ ಕೋಷ್ಟಕದಲ್ಲಿ ಧಾತುಗಳನ್ನು ಪರಮಾಣು ಸಂಖ್ಯೆಯ ಏರಿಕೆ ಕ್ರಮದಲ್ಲಿ ಮತ್ತು ಇಲೆಕ್ಟ್ರಾನ್ ವಿನ್ಯಾಸದ ಆಧಾರದಲ್ಲಿ ಜೋಡಿಸಿದ್ದರಿಂದ, ಮೆಂಡಲೀವ್ ಆವರ್ತಕ ಕೋಷ್ಟಕದ ಮಿತಿಗಳನ್ನು ಸರಿಪಡಿಸಲಾಯಿತು. | 1 | |
| | ★ ಸಮಸ್ಥಾನಿಗಳ ಸಮಸ್ಯೆಯನ್ನು ಬಗೆಹರಿಸಲಾಯಿತು. | | |
| | (ಎರಡು ಮತ್ತು ಮೂರನೇ ಅಂಶಗಳನ್ನು ಬರೆದರೂ ಪೂರ್ಣ ಅಂಕ ನೀಡುವುದು) | | 2 |
| | ***ಅಥವಾ*** | | |
| | ★ ಗುಂಪಿನಲ್ಲಿ ಕೆಳಗೆ ಹೋದಂತೆ ಪರಮಾಣು ಗಾತ್ರ ಹೆಚ್ಚಾಗುತ್ತದೆ. | ½ | |
| | ★ ಏಕೆಂದರೆ ಕೆಳಗೆ ಹೋದಂತೆ ಹೊಸ ಕವಚಗಳು ಸೇರ್ಪಡೆಯಾಗುತ್ತವೆ, ಇದು ಅತ್ಯಂತ ಹೊರಗಿರುವ ಇಲೆಕ್ಟ್ರಾನ್ ಮತ್ತು ನ್ಯೂಕ್ಲಿಯಸ್ ನಡುವಿನ ಅಂತರವನ್ನು ಹೆಚ್ಚಿಸುತ್ತದೆ. | ½ | |
| | ★ ಆವರ್ತದಲ್ಲಿ ಎಡದಿಂದ ಬಲಕ್ಕೆ ಸಾಗಿದಂತೆ ಪರಮಾಣು ಗಾತ್ರ ಕಡಿಮೆಯಾಗುತ್ತದೆ. | ½ | |
| | ★ ಏಕೆಂದರೆ ಹೆಚ್ಚುವ ನ್ಯೂಕ್ಲಿಯಸ್‌ನ ಆವೇಶವು ಇಲೆಕ್ಟ್ರಾನ್‌ಗಳನ್ನು ನ್ಯೂಕ್ಲಿಯಸ್‌ನ ಹತ್ತಿರಕ್ಕೆ ಸೆಳೆಯುತ್ತವೆ. | ½ | 2 |
| 24. | ತಾಮ್ರದ ಸಲ್ಫೇಟ್ ದ್ರಾವಣದಿಂದ ತಾಮ್ರವನ್ನು ಶುದ್ಧೀಕರಿಸಲು ಉಪಯೋಗಿಸುವ ಉಪಕರಣ ಜೋಡಣೆಯ ಚಿತ್ರವನ್ನು ಬರೆಯಿರಿ. ಕೆಳಗಿನ ಭಾಗಗಳನ್ನು ಗುರುತಿಸಿ. | | |
| | a) ಕ್ಯಾಥೋಡ್ | | |
| | b) ಧನಾಗ್ರ ಮಡ್ಡಿ | | |

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|

***ಉತ್ತರ :***




ಚಿತ್ರಕ್ಕೆ 1

ಭಾಗಗಳಿಗೆ ½ + ½ — **2**

26. ಸತು, ಕಬ್ಬಿಣ, ಮೆಗ್ನೀಷಿಯಂ ಹಾಗೂ ತಾಮ್ರದ ಚೂರುಗಳನ್ನು *A, B, C* ಮತ್ತು *D* ಎಂಬ ಪ್ರನಾಳಗಳಲ್ಲಿ ಕ್ರಮವಾಗಿ ತೆಗೆದುಕೊಳ್ಳಲಾಗಿದೆ. ಈ ಪ್ರನಾಳಗಳಿಗೆ ಒಂದೇ ಪ್ರಮಾಣದ ಫೆರಸ್ ಸಲ್ಫೇಟ್ ದ್ರಾವಣವನ್ನು ಸೇರಿಸಲಾಗಿದೆ. ಯಾವ ಪ್ರನಾಳಗಳಲ್ಲಿ ರಾಸಾಯನಿಕ ಕ್ರಿಯೆ ನಡೆಯುತ್ತದೆ ? ಏಕೆ ? ಇಲ್ಲಿ ನಡೆಯುವ ಕ್ರಿಯೆಗಳಿಗೆ ರಾಸಾಯನಿಕ ಸಮೀಕರಣಗಳನ್ನು ಬರೆಯಿರಿ.

***ಉತ್ತರ :***

★ *A* ಮತ್ತು *C* ಪ್ರನಾಳಗಳಲ್ಲಿ ರಾಸಾಯನಿಕ ಕ್ರಿಯೆ ನಡೆಯುತ್ತದೆ. 1

★ ಏಕೆಂದರೆ ಸತು ಮತ್ತು ಮೆಗ್ನೀಷಿಯಂ ಕಬ್ಬಿಣಕ್ಕಿಂತ ಹೆಚ್ಚು ಕ್ರಿಯಾಶೀಲವಾಗಿವೆ ಅಥವಾ ಲೋಹಗಳ ಕ್ರಿಯಾಶೀಲತೆಯ ಸರಣಿಯಲ್ಲಿ ಸತು ಮತ್ತು ಮೆಗ್ನೀಷಿಯಂ ಕಬ್ಬಿಣಕ್ಕಿಂತ ಮೇಲ್ಭಾಗದಲ್ಲಿ ಕಂಡುಬರುತ್ತವೆ. 1

★ ಸತು + ಕಬ್ಬಿಣದ ಸಲ್ಫೇಟ್ $\rightarrow$ ಸತುವಿನ ಸಲ್ಫೇಟ್ + ಕಬ್ಬಿಣ

*ಅಥವಾ*

$Zn + FeSO_4 \rightarrow ZnSO_4 + Fe$ ½

★ ಮೆಗ್ನೀಷಿಯಂ + ಕಬ್ಬಿಣದ ಸಲ್ಫೇಟ್ $\rightarrow$ ಮೆಗ್ನೀಷಿಯಂ ಸಲ್ಫೇಟ್ + ಕಬ್ಬಿಣ

*ಅಥವಾ*

$Mg + FeSO_4 \rightarrow MgSO_4 + Fe$ ½ — **3**

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|
| 29. | ಈ ಕೆಳಗಿನ ಕ್ರಿಯೆಗಳಿಗೆ ಸರಿದೂಗಿಸಿದ ರಾಸಾಯನಿಕ ಸಮೀಕರಣಗಳನ್ನು ಬರೆಯಿರಿ. ಈ ರಾಸಾಯನಿಕ ಕ್ರಿಯೆಗಳು ನಡೆಯುವುದನ್ನು ವೀಕ್ಷಣೆಯಿಂದ ಹೇಗೆ ಖಚಿತಪಡಿಸಿಕೊಳ್ಳಬಹುದು ? | |
| | a) ಸೀಸದ ನೈಟ್ರೇಟ್ ಅನ್ನು ಕಾಸಿದಾಗ | |
| | b) ಬೇರಿಯಂ ಕ್ಲೋರೈಡ್‌ನೊಂದಿಗೆ ಸೋಡಿಯಂ ಸಲ್ಫೇಟ್ ವರ್ತಿಸಿದಾಗ | |
| | ***ಉತ್ತರ :*** | |
| | a) $2Pb(NO_3)_2 \rightarrow 2PbO + 4NO_2 + O_2$ — 1 | |
| | ಕಂದು ಬಣ್ಣದ ಧೂಮ ಉಂಟಾಗುವುದರಿಂದ — ½ | |
| | b) $Na_2SO_4 + BaCl_2 \rightarrow BaSO_4 + 2NaCl$ — 1 | |
| | ಬಿಳಿ ಬಣ್ಣದ ಒತ್ತರ / ಪ್ರಕ್ಷೇಪ ಉಂಟಾಗುವುದರಿಂದ — ½ | 3 |
| 32. | ಕೆಳಗಿನ ಸಂಯುಕ್ತಗಳ ಅಣುಸೂತ್ರಗಳನ್ನು ಬರೆದು ಪ್ರತಿಯೊಂದರ ಎರಡು ಉಪಯೋಗಗಳನ್ನು ತಿಳಿಸಿ. | |
| | a) ಬ್ಲೀಚಿಂಗ್ ಪುಡಿ | |
| | b) ಪ್ಲಾಸ್ಟರ್ ಆಫ್ ಪ್ಯಾರಿಸ್ | |
| | ***ಅಥವಾ*** | |
| | ಪ್ರಬಲ ಆಮ್ಲ ಎಂದರೇನು ? ಹಲ್ಲಿನ ಸವೆತ ಹೇಗೆ ಉಂಟಾಗುತ್ತದೆ ವಿವರಿಸಿ. ಇದನ್ನು ಹೇಗೆ ತಡೆಗಟ್ಟಬಹುದು ? | |
| | ***ಉತ್ತರ :*** | |
| | a) $CaOCl_2$ — ½ | |
| | *ಉಪಯೋಗಗಳು :* | |
| | ★ ಬಟ್ಟೆ ಕಾರ್ಖಾನೆಯಲ್ಲಿ ಹತ್ತಿ ಮತ್ತು ನಾರಿಗೆ ಬಿಳುಪು ನೀಡಲು, ಕಾಗದ ಕಾರ್ಖಾನೆಯಲ್ಲಿ ಮರದ ತಿರುಳಿಗೆ ಬಿಳುಪು ನೀಡಲು ಲಾಂಡ್ರಿಯಲ್ಲಿ ತೊಳೆದ ಬಟ್ಟೆಗೆ ಬಿಳುಪು ನೀಡಲು. | |
| | ★ ಅನೇಕ ರಾಸಾಯನಿಕ ಕಾರ್ಖಾನೆಗಳಲ್ಲಿ ಉತ್ಕರ್ಷಣಕಾರಿಯಾಗಿದೆ. | |
| | ★ ಕುಡಿಯುವ ನೀರನ್ನು ಕ್ರಿಮಿಮುಕ್ತಗೊಳಿಸಲು. | |
| | (ಯಾವುದಾದರೂ 2 ಉಪಯೋಗಗಳು) ½ + ½ | |

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|

b) $CaSO_4 \cdot \frac{1}{2} H_2O$ ½

*ಉಪಯೋಗಗಳು :*

- ★ ಆಟಿಕೆಗಳ ತಯಾರಿಕೆ
- ★ ಅಲಂಕಾರಿಕ ವಸ್ತುಗಳಲ್ಲಿ
- ★ ನುಣುಪಾದ ಮೇಲ್ಮೈ ನಿರ್ಮಿಸಲು

(ಯಾವುದಾದರೂ 2 ಉಪಯೋಗಗಳು) ½ + ½ | 3

***ಅಥವಾ***


- ★ ಹೆಚ್ಚು $H^+$ ಅಯಾನುಗಳನ್ನು ಉತ್ಪತ್ತಿ ಮಾಡುವ ಆಮ್ಲವನ್ನು ಪ್ರಬಲ ಆಮ್ಲ ಎಂದು ಕರೆಯುತ್ತಾರೆ. 1
- ★ ಆಹಾರ ಸೇವನೆಯ ನಂತರ ಬಾಯಿಯಲ್ಲಿ ಉಳಿದ ಸಕ್ಕರೆ ಮತ್ತು ಆಹಾರದ ಕಣಗಳ ವಿಘಟನೆಯಿಂದ ಬಾಯಿಯಲ್ಲಿರುವ ಬ್ಯಾಕ್ಟೀರಿಯಾಗಳು ಆಮ್ಲಗಳನ್ನು ಉತ್ಪತ್ತಿ ಮಾಡುತ್ತವೆ. ಇದರಿಂದ ಬಾಯಿಯಲ್ಲಿ pH ಕಡಿಮೆಯಾಗುತ್ತದೆ ಮತ್ತು ಹಲ್ಲಿನ ಎನಾಮಲ್ ಸವೆತಕ್ಕೆ ಒಳಗಾಗುತ್ತದ. 1
- ★ ಹಲ್ಲುಗಳನ್ನು ಸ್ವಚ್ಛಗೊಳಿಸಲು ಸಾಮಾನ್ಯವಾಗಿ ಪ್ರತ್ಯಾಮ್ಲೀಯವಾಗಿರುವ ಟೂತ್‌ಪೇಸ್ಟ್‌ಗಳನ್ನು ಬಳಸುವುದರಿಂದ. 1 | 3



34. a) ರಚನಾ ಸಮಾಂಗಿಗಳು ಎಂದರೇನು ? ಬ್ಯೂಟೇನ್ ಅಣುವಿನ ಎರಡು ರಚನೆಗಳನ್ನು ಬರೆಯಿರಿ.

b) ಆಲ್ಕೋಹಾಲ್ ಮತ್ತು ಕಾರ್ಬಾಕ್ಸಿಲಿಕ್ ಆಮ್ಲದ ನಡುವಣ ವ್ಯತ್ಯಾಸವನ್ನು ಪ್ರಾಯೋಗಿಕವಾಗಿ ಹೇಗೆ ಪತ್ತೆಹಚ್ಚುವಿರಿ ?

***ಉತ್ತರ :***

a) ★ ಒಂದೇ ಅಣುಸೂತ್ರ ಆದರೆ ವಿಭಿನ್ನ ರಚನೆ ಹೊಂದಿರುವ ಕಾರ್ಬನ್ ಸಂಯುಕ್ತಗಳನ್ನು ರಚನಾ ಸಮಾಂಗಿಗಳು ಎನ್ನುವರು. 1

★  ½

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | | ಅಂಕಗಳು |
|---|---|---|---|
| | ★  ಅಥವಾ  | ½ | |
| | b) ಕಾರ್ಬಾಕ್ಸಿಲಿಕ್ ಆಮ್ಲ, ಕಾರ್ಬೋನೇಟ್‌ಗಳು ಮತ್ತು ಹೈಡ್ರೋಜನ್ ಕಾರ್ಬೋನೇಟ್‌ಗಳೊಂದಿಗೆ ವರ್ತಿಸಿ ಲವಣ, ಕಾರ್ಬನ್ ಡೈಆಕ್ಸೈಡ್ ಮತ್ತು ನೀರನ್ನು ಉಂಟು ಮಾಡುತ್ತದೆ. | 1 | |
| | ಆಲ್ಕೋಹಾಲ್ ಕಾರ್ಬೋನೇಟ್ ಮತ್ತು ಹೈಡ್ರೋಜನ್ ಕಾರ್ಬೋನೇಟ್‌ಗಳೊಂದಿಗೆ ವರ್ತಿಸುವುದಿಲ್ಲ. | 1 | 4 |